95

## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಎ.ತಿಪ್ಪೇಸ್ವಾಮಿ ಇವರು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

*********

**ಪ್ರಶ್ನೆ:-**

ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಶಾಲಾ ಶಿಕ್ಷಕರು, ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ಹಾಗೂ ಪ್ರಾಂಶುಪಾಲರನ್ನು ಬೋಧಕೇತರ ಹುದ್ದೆಗಳಿಗೆ ನಿಯೋಜನೆ ಮಾಡಬಾರದೆಂಬ ರಾಜ್ಯದ ಉಚ್ಚ ನ್ಯಾಯಾಲಯ ಹಾಗೂ ಸರ್ವೋಚ್ಛ ನ್ಯಾಯಾಲಯದ ಆದೇಶವಿದ್ದು, ಮಾನ್ಯ ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ 2020 ಜುಲೈ 30 ರಂದು ಸುತ್ತೋಲೆ ಹೊರಡಿಸಿರುವ ಅಲ್ಪಸಂಖ್ಯಾತರ ನಿರ್ದೇಶನಾಲಯವು, ತನ್ನ ಅಧೀನದಲ್ಲಿರುವ ಶಾಲೆಗಳ ಶಿಕ್ಷಕರು, ಉಪನ್ಯಾಸಕರು, ಪ್ರಾಂಶುಪಾಲರನ್ನು ಬೋಧನೆ ಹೊರತುಪಡಿಸಿ ಬೇರೆ ಉದ್ದೇಶಗಳಿಗೆ ನಿಯೋಜಿಸಬಾರದೆಂದು ಆದೇಶವಿದ್ದರೂ ಯಾವ ಆಧಾರದ ನಿಯಮಗಳ ವಿರುದ್ಧವಾಗಿ ನಿಯೋಜನೆಗೆ ಮಾಡಲಾಗಿರುವ ವಿವರಗಳನ್ನು ಒದಗಿಸುವುದು ಹಾಗೂ ನಿಯೋಜನೆ ಮಾಡಲಗಿರುವ ಬಗ್ಗೆ ಇಲಾಖೆಯ ಕಾರ್ಯದರ್ಶಿಗಳಿಗೆ ಮಾಹಿತಿ ಇರುವುದಿಲ್ಲವೆಂದು ಪತ್ರಿಕೆಗೆ ತಿಳಿಸಿದ ಮೇಲೆ ಸರ್ಕಾರದ ಆದೇಶ ಹೊರಡಿಸಲು ಸೂಚನೆ ನೀಡಿದವರ್ಯಾರು ಎಂಬುದರ ಬಗ್ಗೆ ವಿವರಗಳನ್ನು ಒದಗಿಸುವಂತೆ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:-**

ಅಲ್ಪಸಂಖ್ಯಾತರ ನಿರ್ದೇಶನಾಲಯದ ದಿನಾಂಕ:30.07.2020 ರ ಸುತ್ತೋಲೆಯಲ್ಲಿ 'ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯದ ಆದೇಶದನ್ವಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಎಲ್ಲಾ ಜಿಲ್ಲಾ ಅಧಿಕಾರಿಗಳಿಗೆ, ಮೊರಾರ್ಜಿದೇಸಾಯಿ ವಸತಿ ಶಾಲೆ, ವಸತಿ ಪದವಿ ಪೂರ್ವ ಕಾಲೇಜು ಮತ್ತು ಮೌಲಾನ ಆಜಾದ್ ಮಾದರಿ ಶಾಲೆ ಇತ್ಯಾದಿಗಳಲ್ಲಿ ಬೋಧಿಸುತ್ತಿರುವ ಹಾಗೂ ಶಿಕ್ಷಣ ಇಲಾಖೆ/ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಶಿಕ್ಷಕರು, ಉಪನ್ಯಾಸಕರು ಮತ್ತು ಪ್ರಾಂಶುಪಾಲರು ಇವರುಗಳನ್ನು ಬೋಧನೆಯನ್ನು ಹೊರತುಪಡಿಸಿ ಬೇರೆ ಉದ್ದೇಶಗಳಿಗೆ ನಿಯೋಜಿಸತಕ್ಕದ್ದಲ್ಲ' ಎಂದು ಸೂಚಿಸಲಾಗಿರುತ್ತದೆ.

ಸದರಿ ಸುತ್ತೋಲೆಯ ಸೂಚನೆಯನ್ನು ಪಾಲಿಸುತ್ತಿದ್ದು ಅನಿವಾರ್ಯ ಸಂದರ್ಭಗಳಲ್ಲಿ ಬೋಧಕ ಸಿಬ್ಬಂದಿಗಳನ್ನು ಅಧಿಕಾರಿ/ಸಿಬ್ಬಂದಿಗಳ ಹುದ್ದೆಗಳು ಖಾಲಿಯಿರುವುದರಿಂದಾಗಿ ಆಡಳಿತಾತ್ಮಕ ಹಿತದೃಷ್ಠಿಯಿಂದ ತಾತ್ಕಾಲಿಕವಾಗಿ ಆಡಳಿತಾತ್ಮಕ ಹುದ್ದೆಗಳಿಗೆ ವರ್ಗಾವಣೆ/ನಿಯೋಜನೆ ಮಾಡಲಾಗಿರುತ್ತದೆ. ಇದರಿಂದ ಶೈಕ್ಷಣಿಕ ಪ್ರಗತಿಗೆ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ.

ಕಡತ ಸಂಖ್ಯೆ: MWD 288 LMQ 2024

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು